1165 ಶ್ರೀ ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಮತಕ್ಷೇತ್ರದ ಹನ್ನಿಕೇರಿ ಸರಕಾರಿ ಸಂಯುಕ್ತ ಪ್ರೌಢ ಶಾಲೆಯ ಎಸ್.ಡಿ.ಎಂ.ಸಿ.ಯಲ್ಲಿ ಸರ್ವ ಶಿಕ್ಷಣ ಅಭಿಯಾನ ಯೋಜನೆಯ ಅನುದಾನವನ್ನು ದುರ್ಬಳಕೆ ಮಾಡಿಕೊಂಡಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಶ್ರೀ ಎಂ.ಎಂ. ಶಿರಗಾಂವಿ ಮುಖ್ಯ ಶಿಕ್ಷಕರು, ಸರಕಾರಿ ಸಂಯುಕ್ತ ಪ್ರೌಢಶಾಲೆ ಹನ್ನಿಕೇರಿ ಮತ್ತು ಸಂಬಂಧಿಸಿದ ಪ್ರಾಥಮಿಕ ಶಾಲೆಗಳ ಎಸ್.ಡಿ.ಎಂ.ಸಿ ಅಧ್ಯಕ್ಷರುಗಳ ಮೇಲೆ ನೇಸರಗಿ ಪೊಲೀಸ್ ಠಾಣೆ ತಾಲ್ಲೂಕು ಬೈಲಹೊಂಗಲ ಇಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿದೆ. ಮುಖ್ಯ ಶಿಕ್ಷಕರನ್ನು 13–07–2009ರಂದು ಅಮಾನತ್ತುಗೊಳಿಸಲಾಗಿದೆ.

874 ಶ್ರೀ ರುದ್ರೇಶಗೌಡ ವೈ. ಎನ್. (ಬೇಲೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಹಗರಿ ಗ್ರಾಮದಲ್ಲಿ ಶಾಲಾ ಆಟದ ಮೈದಾನ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಎಷ್ಟು ಗಂಟೆ ಜಾಗ ಒತ್ತುವರಿಯಾಗಿರುತ್ತದೆ;

ಇ) ಈ ಒತ್ತುವರಿ ತೆರವಿಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ (ವಿವರ ನೀಡುವುದು)?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಆಟದ ಮೈದಾನದ 0.1/2 ಗುಂಟೆ ಪ್ರದೇಶ ಒತ್ತುವರಿಯಾಗಿರುತ್ತದೆ.

ಇ) ಬೇಲೂರು ತಾಲ್ಲೂಕು, ಹಗರಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಗೆ ಸೇರಿದ ಒತ್ತುವರಿ ಜಮೀನಿನ ವಿವಾದವು ಸಿವಿಲ್ ನ್ಯಾಯಾಲಯ ಬೇಲೂರಿನಲ್ಲಿ ಇರುವುದಾಗಿ ಬೇಲೂರು ತಾಲ್ಲೂಕು ತಹಶೀಲ್ದಾರ್‌ರವರು ವರದಿ ಮಾಡಿರುತ್ತಾರೆ.

803 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಶ್ಚಿಮ ಘಟ್ಟಗಳಿಂದ ಪಶ್ಚಿಮಾಭಿಮುಖವಾಗಿ ಅಭಾವ ಪೀಡಿತ ಪ್ರದೇಶಗಳಿಗೆ ನೀರು ಹರಿಸುವ ಯೋಜನೆಯ ಸರ್ವೆ ಕಾರ್ಯ ಪ್ರಗತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಗುಂಡ್ಯ ಯೋಜನೆಯನ್ನು ಮಾಡಿದ್ದು, ಈ ಯೋಜನೆಗೆ ನೀರನ್ನು ಸಮುದ್ರ ಮಟ್ಟದಿಂದ ಎಷ್ಟು ಎತ್ತರದಲ್ಲಿ ತೆಗೆದುಕೊಳ್ಳಲಾಗುವುದು?

ಇ) ಚಿಕ್ಕಬಳ್ಳಾಪುರ ಭೌಗೋಳಿಕವಾಗಿ ಅತಿ ಎತ್ತರದಲ್ಲಿದ್ದು ಪಶ್ಚಿಮ ಘಟ್ಟಗಳಿಂದ ಗುರುತ್ವಾಕರ್ಷಣೆಯಲ್ಲಿ ನೀರು ತರುವುದಕ್ಕೆ ಸರ್ಕಾರ ಬದ್ಧವಾಗಿದೆಯೇ?

ಈ) ಹಾಗಿದ್ದಲ್ಲಿ, ಈ ಭಾಗದ ಜನಸಾಮಾನ್ಯರ ನೀರಿನ ಬವಣೆ ತೀರಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು) :

ಅ) ಹೌದು, ಸರ್ಕಾರದ ಗಮನಕ್ಕೆ ಬಂದಿದೆ.

ಆ) ಗುಂಡ್ಯಾ ಜಲವಿದ್ಯುತ್ ಯೋಜನೆಗೆ ಸಮುದ್ರ ಮಟ್ಟದಿಂದ ಸುಮಾರು 740 ಮೀ. ಹಾಗೂ ಎತ್ತರದ ಜಲಾನಯನ ಪ್ರದೇಶದಿಂದ ನೀರನ್ನು ತೆಗೆದುಕೊಳ್ಳಲಾಗುವುದು.

ಇ) ಪಶ್ಚಿಮಾಭಿಮುಖವಾಗಿ ಹರಿಯುವ ನದಿಗಳ ಹೆಚ್ಚುವರಿ ನೀರನ್ನು ಕರ್ನಾಟಕ ರಾಜ್ಯದ ಪೂರ್ವ ಹಾಗೂ ಪೂರ್ವೋತ್ತರ ಭಾಗಗಳಿಗೆ ತಿರುಗಿಸುವ ಯೋಜನೆಯು ತನಿಖಾನ್ವೇಷಣೆ ಹಂತದಲ್ಲಿದೆ.

ತನಿಖಾನ್ವೇಷಣೆ ಕಾರ್ಯವು ಪೂರ್ಣಗೊಂಡ ನಂತರ ಪಶ್ಚಿಮ ಘಟ್ಟಗಳ ಪ್ರದೇಶದಿಂದ ಚಿಕ್ಕಬಳ್ಳಾಪುರ ಪ್ರದೇಶಕ್ಕೆ ಗುರುತ್ವಾಕರ್ಷಣೆ ಮೂಲಕ ನೀರನ್ನು ಹರಿಸುವುದರ ಸಾಧ್ಯತೆ ತಿಳಿದುಬರುತ್ತದೆ.

ಈ) ಚಿಕ್ಕಬಳ್ಳಾಪುರ ಪಟ್ಟಣಕ್ಕೆ ಜಕ್ಕಲಮಡಗು ಜಲಾಶಯವನ್ನು ಅಭಿವೃದ್ಧಿ ಪಡಿಸಿ ನೀರು ಸರಬರಾಜು ಮಾಡಲು ರೂ. 27.00 ಕೋಟಿಗಳ